ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

2

ಇಲಾಖೆ / ವಿಷಯ : DEPARTMENT / SUBJECT: ಸಮಾಜ ಕಲ್ಯಾಣ ಇಲಾಖೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯ ಕರ್ನಾಟಕ    ದಿನಾಂಕ : DATE 15-2-21

## ಸಂತ ಸೇವಾಲಾಲ್‌ರ ಜಯಂತ್ಯುತ್ಸವ ಸಮಾರಂಭದಲ್ಲಿ ಸಿಎಂ ಘೋಷಣೆ

# ತಾಂಡಾಗೆ ಕಂದಾಯ ಗ್ರಾಮ ಮಾನ್ಯತೆ

■ **ವಿಕ ಸುದ್ದಿಲೋಕ** ದಾವಣಗೆರೆ/ನ್ಯಾಮತಿ

ಮುಂದಿನ ವರ್ಷ ಸಂತ ಸೇವಾಲಾಲ್ ಜಯಂತಿ ಬರುವ ಹೊತ್ತಿಗೆ ರಾಜ್ಯದ ಎಲ್ಲಾ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತಿಸಲಾಗುವುದು ಎಂದು ಸಿಎಂ ಬಿ.ಎಸ್. ಯಡಿಯೂರಪ್ಪ ಘೋಷಿಸಿದರು.

ಜಿಲ್ಲೆಯ ನ್ಯಾಮತಿ ತಾಲೂಕು ಸೂರಗೊಂಡನಕೊಪ್ಪದಲ್ಲಿ ಭಾನುವಾರ ಏರ್ಪಡಿಸಿದ್ದ ಸಂತ ಸೇವಾಲಾಲ್‌ರ 282ನೇ ಜಯಂತ್ಯುತ್ಸವ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಬಂಜಾರ ಸಮುದಾಯದವರಿಗೆ ಆಧ್ಯಾತ್ಮದ ಬೆಳಕು ತೋರಿದ ಮಹಾಸಂತ ಸೇವಾಲಾಲ್‌ರ ಜನ್ಮಸ್ಥಳ ಸೂರಗೊಂಡನಕೊಪ್ಪ (ಬಾಯಗಡ್) ಅಭಿವೃದ್ಧಿಗಾಗಿ ಸೇವಾಲಾಲ್ ಪ್ರತಿಷ್ಠಾನಕ್ಕೆ 10 ಕೋಟಿ ರೂ. ನೀಡಿ ರಸ್ತೆ, ಮೂಲ ಸೌಕರ್ಯ ಅಭಿವೃದ್ಧಿಪಡಿಸಲಾಗುವುದು,'' ಎಂದರು.

''ಈ ಸಮಾಜವೂ ಶೈಕ್ಷಣಿಕವಾಗಿ, ಆರ್ಥಿಕ ಮುಖ್ಯವಾಹಿನಿಗೆ ಬರಬೇಕು. ಈ ಹಿಂದೆ ನಾನು ಕರ್ನಾಟಕ ಬಂಜಾರ ಅಭಿವೃದ್ಧಿ ನಿಗಮ ಸ್ಥಾಪಿಸಿದ್ದೆ. ಈ ಬಾರಿ ಮತ್ತೆ ಬಂಜಾರ ಅಭಿವೃದ್ಧಿ ನಿಗಮಕ್ಕೆ 10 ಕೋಟಿ ರೂ. ಅನುದಾನ ನೀಡಲಾಗುವುದು. ಜತೆಗೆ ಸೂರಗೊಂಡನಕೊಪ್ಪದ ರೈಲ್ವೆ ನಿಲ್ದಾಣಕ್ಕೆ ಭಾಯ್‌ಗಡ್ ಹೆಸರು ನಾಮಕರಣ ಮಾಡಲಾಗುವುದು,'' ಎಂದರು.

**ಸಿದ್ಧ ಉಡುಪು ಘಟಕ:** ಸೂರಗೊಂಡನಕೊಪ್ಪ ಧಾರ್ಮಿಕ ಕ್ಷೇತ್ರವಾಗಿ ಮಾತ್ರ ಬೆಳೆಯದೆ ಬಂಜಾರ ಸಮಾಜದ ವಿಶಿಷ್ಟ ಕಲೆ, ಸಂಸ್ಕೃತಿಯ ಉನ್ನತೀಕರಣ ಮಾಡುವ ಕೇಂದ್ರವಾಗಿದೆ. ಸಂತ ಸೇವಾಲಾಲರ ಜನ್ಮಸ್ಥಳ ರಾಜ್ಯದ ಪ್ರಮುಖ ಪ್ರವಾಸಿ ತಾಣ ಮಾಡಲು ಆದ್ಯತೆ ನೀಡಲಾಗುವುದು. ಈ ಸಮುದಾಯದ ಶ್ರೀಮಂತ ಕಲೆ, ಸಂಸ್ಕೃತಿ ಉತ್ತೇಜಿಸಲು ಕಲ್ಯಾಣ ಕರ್ನಾಟಕಕ್ಕೆ ಸೇರಿದ ಹುಮನಾಬಾದ್‌ನಲ್ಲಿ ಬಂಜಾರ ಸಿದ್ಧ ಉಡುಪು ತಯಾರಿಕಾ ಘಟಕ ಸ್ಥಾಪಿಸಲು 34 ಎಕರೆ ಮಂಜೂರು ಮಾಡಲಾಗುವುದು,'' ಎಂದರು. ಸಮಾಜ ಕಲ್ಯಾಣ ಸಚಿವ ಬಿ. ಶ್ರೀರಾಮುಲು, ನಗರಾಭಿವೃದ್ಧಿ ಸಚಿವ ಭೈರತಿ ಬಸವರಾಜ್, ಪಶುಸಂಗೋಪನೆ ಸಚಿವ ಪ್ರಭು ಚೌಹಾಣ್, ತೋಟಗಾರಿಕೆ ಹಾಗೂ ರೇಷ್ಮೆ ಸಚಿವ ಆರ್.ಶಂಕರ್, ಸಂಸದ ಬಿ.ವೈ. ರಾಘವೇಂದ್ರ, ಶಾಸಕ ಎಂ.ಪಿ. ರೇಣುಕಾಚಾರ್ಯ ಇತರರು ಇದ್ದರು.



ಸೂರಗೊಂಡನಕೊಪ್ಪದಲ್ಲಿ ಭಾನುವಾರ ಏರ್ಪಡಿಸಿದ್ದ ಸಂತ ಸೇವಾಲಾಲ್‌ರ 228ನೇ ಜಯಂತ್ಯುತ್ಸವವನ್ನು ಸಿಎಂ ಬಿ.ಎಸ್. ಯಡಿಯೂರಪ್ಪ ಉದ್ಘಾಟಿಸಿದರು. ಸಚಿವರಾದ ಬಿ.ಶ್ರೀರಾಮುಲು, ಭೈರತಿ ಬಸವರಾಜ್, ಪ್ರಭು ಚೌಹಾಣ್, ಆರ್.ಶಂಕರ್, ಶಾಸಕ ಎಂ.ಪಿ. ರೇಣುಕಾಚಾರ್ಯ ಇದ್ದರು.



ಸೇವಾಲಾಲ್‌ರ ಜಯಂತ್ಯುತ್ಸವ ಸಮಾರಂಭದಲ್ಲಿ ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ, ಮಾಜಿ ಸಚಿವ ಪಿ.ಟಿ. ಪರಮೇಶ್ವರ ನಾಯ್ಕ ಪಾಲ್ಗೊಂಡಿದ್ದರು

### ವಸತಿ ಶಾಲೆಗೆ ಮನವಿ

ತಾಂಡಾ ಅಭಿವೃದ್ಧಿ ನಿಗಮದ ಅಧ್ಯಕ್ಷ ರಾಜೀವ್ ಮಾತನಾಡಿ, ''ತಾಂಡಾಗಳ ಜನರು ಉದ್ಯೋಗ ಅರಸಿ ಗುಳೆ ಹೋದಾಗ ಅವರ ಮಕ್ಕಳು ಶಿಕ್ಷಣದಿಂದ ವಂಚಿತರಾಗದಿರಲು ತಾಂಡಾಗಳಲ್ಲಿ ವಸತಿ ಶಾಲೆಗಳನ್ನು ಶಾಶ್ವತವಾಗಿ ಆರಂಭಿಸಬೇಕು,'' ಎಂದು ಮನವಿ ಮಾಡಿದರು.

### ಜಾತಿ ವ್ಯವಸ್ಥೆ ತೊಲಗಿದಾಗ ಸಮ ಸಮಾಜ: ಸಿದ್ದರಾಮಯ್ಯ

ಸಮ ಸಮಾಜ ನಿರ್ಮಾಣವಾಗಬೇಕಾದರೆ ಜಾತಿ ವ್ಯವಸ್ಥೆ ತೊಲಗಬೇಕು. ಪ್ರತಿಯೊಬ್ಬರು ಶಿಕ್ಷಣವಂತರಾಗುವುದೇ ಇದಕ್ಕೆ ದಾರಿ ಎಂದು ಪ್ರತಿಪಕ್ಷ ನಾಯಕ ಸಿದ್ದರಾಮಯ್ಯ ಹೇಳಿದರು.

ಸಂತ ಸೇವಾಲಾಲ್‌ರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಾತನಾಡಿದರು. ''ನಾವು ಎಲ್ಲಿಯವರೆಗೆ ವಿದ್ಯಾವಂತರಾಗುವುದಿಲ್ಲವೋ ಅಲ್ಲಿಯವರೆಗೆ ಜಾತಿ ವ್ಯವಸ್ಥೆ ಇರುತ್ತದೆ,'' ಎಂದರು. ಮಾಜಿ ಸಚಿವರಾದ ಪಿ.ಟಿ. ಪರಮೇಶ್ವರ ನಾಯ್ಕ, ರುದ್ರಪ್ಪ ಲಮಾಣಿ ಇತರರು ಇದ್ದರು.

### ಮಕ್ಕಳಿಗೆ ಶಿಕ್ಷಣ ಕೊಡಿಸಿ

ಸಮಾಜ ಕಲ್ಯಾಣ ಸಚಿವ ಬಿ. ಶ್ರೀರಾಮುಲು ಮಾತನಾಡಿ, ''ಬಂಜಾರ ಸಮುದಾಯದ ಬಗ್ಗೆ ಸಿಎಂಗೆ ಚೆನ್ನಾಗಿ ಗೊತ್ತಿದೆ. ಈ ಹಿಂದೆ ನಮ್ಮ ಸರಕಾರದ ಅವಧಿಯಲ್ಲಿ ತಾಂಡಾ ಅಭಿವೃದ್ಧಿ ನಿಗಮ ಸ್ಥಾಪಿಸಿ ಆ ಮೂಲಕ ಸಮುದಾಯ ಅಭಿವೃದ್ಧಿಗೆ ಕೊಡುಗೆ ನೀಡಿದ್ದಾರೆ. ಸಂತ ಸೇವಾಲಾಲ್ ಅವರ ಜಯಂತಿ ಮೂಲಕ ಜಗತ್ತಿಗೆ ಬೆಳಕು ನೀಡುವ ಕೆಲಸವಾಗಬೇಕು. ಪಾಲಕರು ಮಕ್ಕಳಿಗೆ ಆಧುನಿಕ ಶಿಕ್ಷಣ, ಸಂಸ್ಕಾರ ಎಲ್ಲರ ನಡುವೆ ಗುರುತಿಸಿಕೊಳ್ಳುವಂತೆ ಮಾಡಬೇಕು,'' ಎಂದು ಸಲಹೆ ನೀಡಿದರು.

''ಬಂಜಾರ ಭಾಷೆ ಮತ್ತು ಸಂಸ್ಕೃತಿ ಅಭಿವೃದ್ಧಿಗಾಗಿ ಬಂಜಾರ ಭಾಷಾ ಅಕಾಡೆಮಿ ಸ್ಥಾಪನೆಗೆ ಸರಕಾರ ಆದೇಶ ಹೊರಡಿಸಿದೆ. ಬಂಜಾರ ಭಾಷೆಯನ್ನು ಪರಿಚ್ಛೇದ 8ರಲ್ಲಿ ಸೇರಿಸಲು ಕೇಂದ್ರ ಸರಕಾರಕ್ಕೆ ಶಿಫಾರಸು ಮಾಡಲಾಗುವುದು. ಈಗಾಗಲೇ ಇದಕ್ಕಾಗಿ ಸರಕಾರ ಹಂಪನಾ ನಾಗರಾಜ್ ನೇತೃತ್ವದ ತಜ್ಞರ ಸಮಿತಿ ರಚಿಸಿದೆ,'' ಎಂದು ಸಿಎಂ ಯಡಿಯೂರಪ್ಪ ಹೇಳಿದರು.